ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

ಸಂಖ್ಯೆ: ಆಯೋಪ್ರಾ/ಎಲ್‌ಎಓ/31/2022-23 ದಿನಾಂಕ: 05 SEP 2023

## "ತಾತ್ಕಾಲಿಕ ವಿನ್ಯಾಸ ಅನುಮೋದನಾ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2-ಎ)ರನ್ವಯ)

ವಿಷಯ: ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಕಸಬಾ ಹೋಬಳಿ, ಆವಡದೇನಹಳ್ಳಿ ಗ್ರಾಮದ ಸ.ನಂ.67/1ರಲ್ಲಿನ 0-21ಗುಂಟೆ, 67/2ರಲ್ಲಿನ 0-05ಗುಂಟೆ, 68ರಲ್ಲಿನ 0-15ಗುಂಟೆ, 69/1ರಲ್ಲಿನ 0-12ಗುಂಟೆ, 69/2ರಲ್ಲಿನ 0-04ಗುಂಟೆ, 70ರಲ್ಲಿನ 0-34ಗುಂಟೆ, 71ರಲ್ಲಿನ 0-17ಗುಂಟೆ, 72ರಲ್ಲಿನ 0-12ಗುಂಟೆ, 73/1ರಲ್ಲಿನ 0-11ಗುಂಟೆ, 73/2ಎ ರಲ್ಲಿನ 0-04ಗುಂಟೆ, 73/2ಬಿ ರಲ್ಲಿನ 0-04ಗುಂಟೆ, 78/1ರಲ್ಲಿನ 0-07.04ಗುಂಟೆ, 78/2ರಲ್ಲಿನ 0-14.12ಗುಂಟೆ ಮತ್ತು ಬ್ಯಾಗಡದೇನಹಳ್ಳಿ ಗ್ರಾಮದ ಸ.ನಂ.20/1ರಲ್ಲಿನ 0-24ಗುಂಟೆ, 20/2ರಲ್ಲಿನ 0-04ಗುಂಟೆ, 22/3ರಲ್ಲಿನ 0-02ಗುಂಟೆ, 22/4ರಲ್ಲಿನ 0-04ಗುಂಟೆ, 23/1ರಲ್ಲಿನ 0-28ಗುಂಟೆ, 23/3ರಲ್ಲಿನ 0-03ಗುಂಟೆ, 24ರಲ್ಲಿನ 0-23ಗುಂಟೆ, 25/1ರಲ್ಲಿನ 0-12.08ಗುಂಟೆ, 25/2ರಲ್ಲಿನ 0-12.08ಗುಂಟೆ, 26ರಲ್ಲಿನ 0-07ಗುಂಟೆ, 27/1ರಲ್ಲಿನ 0-04.08ಗುಂಟೆ, 27/2ರಲ್ಲಿನ 0-02.04ಗುಂಟೆ, 27/3ರಲ್ಲಿನ 0-06.12ಗುಂಟೆ, 27/4ರಲ್ಲಿನ 0-06.08ಗುಂಟೆ, 27/5ರಲ್ಲಿನ 03.08ಗುಂಟೆ, 27/6ರಲ್ಲಿನ 0-03.08ಗುಂಟೆ, 28/1ರಲ್ಲಿನ 0-07.08ಗುಂಟೆ, 28/2ರಲ್ಲಿನ 0-07ಗುಂಟೆ, 28/3ರಲ್ಲಿನ 0-07.08ಗುಂಟೆ, 28/4ರಲ್ಲಿನ 0-39ಗುಂಟೆ, 29/1ರಲ್ಲಿನ 0-13ಗುಂಟೆ, 29/2ರಲ್ಲಿನ 0-13ಗುಂಟೆ, 30/1ರಲ್ಲಿನ 0-11ಗುಂಟೆ, 31/2ರಲ್ಲಿನ 0-19ಗುಂಟೆ, 31/3ರಲ್ಲಿನ 0-13.04ಗುಂಟೆ, 32/1ರಲ್ಲಿನ 0-09ಗುಂಟೆ, 32/2ರಲ್ಲಿನ 0-01ಗುಂಟೆ, 32/3ರಲ್ಲಿನ 0-14ಗುಂಟೆ, 32/4ರಲ್ಲಿನ 0-08ಗುಂಟೆ, 32/5ರಲ್ಲಿನ 0-06ಗುಂಟೆ, 32/6ರಲ್ಲಿನ 0-15ಗುಂಟೆ, 33/1ರಲ್ಲಿನ 0-07ಗುಂಟೆ, 33/2ರಲ್ಲಿನ 0-08ಗುಂಟೆ, 35/2ರಲ್ಲಿನ 0-12ಗುಂಟೆ, 35/3ರಲ್ಲಿನ 0-13ಗುಂಟೆ, 36/3ರಲ್ಲಿನ 0-06.08ಗುಂಟೆ, 36/5ರಲ್ಲಿನ 0-06.08ಗುಂಟೆ, 37/1ರಲ್ಲಿನ 0-14ಗುಂಟೆ, 37/2ರಲ್ಲಿನ 0-09ಗುಂಟೆ, 37/3ರಲ್ಲಿನ 0-08.08ಗುಂಟೆ, 39/1ರಲ್ಲಿನ 0-08ಗುಂಟೆ, 39/2ರಲ್ಲಿನ 0-38ಗುಂಟೆ, 40ರಲ್ಲಿನ 0-23ಗುಂಟೆ, 41ರಲ್ಲಿನ 01ಎಕರೆ 25.08ಗುಂಟೆ, 43/1ರಲ್ಲಿನ 0-22ಗುಂಟೆ ಒಟ್ಟು 18ಎಕರೆ 12.04ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:

1) ಅರ್ಜಿದಾರರಾದ ಶ್ರೀ ಎಂ.ಮುನಿರೆಡ್ಡಿ, ಶ್ರೀಮತಿ ಜಯಮ್ಮ, ಮೆ: ಪೀಸ್ ಡೆವಲಪರ್ಸ್ & ಬಿಲ್ಡರ್ಸ್ ಹಾಗೂ ಇತರರ ಪರವಾಗಿ ಜಿಪಿಎ ಮತ್ತು ಜಂಟಿ ಅಭಿವೃದ್ಧಿದಾರರಾದ M/s. BAKY Proptech ಪರವಾಗಿ ಪಾಲುದಾರರಾದ ಶ್ರೀ ಬಾಬುರೆಡ್ಡಿ.ಆರ್ ಮತ್ತು ಶ್ರೀ ಕೆ.ವಿ.ಅಶ್ವಥ ರೆಡ್ಡಿ ರವರ ಮನವಿ ದಿನಾಂಕ:08.06.2022.
2) ದಿನಾಂಕ:20.10.2022ರಂದು ನಡೆದ ಪ್ರಾಧಿಕಾರದ 80ನೇ ಸಭೆಯ ಹೆಚ್ಚುವರಿ ವಿಷಯ ಸಂಖ್ಯೆ:56.4ರ ನಿರ್ಣಯ.

05/09/2023

ಸದಸ್ಯ ಕಾರ್ಯದರ್ಶಿ
ಆನೇಕಲ್ ಯೋಜನಾ ಪ್ರಾಧಿಕಾರ.

3) ಅರ್ಜಿದಾರರು ಪ್ರಾಧಿಕಾರಕ್ಕೆ ಉತ್ತಮತೆ ಶುಲ್ಕ ರೂ.25,97,500/-, ಪರಿಶೀಲನಾ ಶುಲ್ಕ ರೂ.75,500/-, ಉಸ್ತುವಾರಿ ಶುಲ್ಕ ರೂ.8,000/-, ನಕ್ಷೆ ಪ್ರತಿ ಶುಲ್ಕ ರೂ.2,000/-, ಕೆರೆ ಪುನರುಜ್ಜೀವನ ಶುಲ್ಕ ರೂ.18,52,500/-, ನೀರು ಸರಬರಾಜು ಸೆಸ್ ರೂ.2,96,500/-, ರಿಂಗ್ ರೋಡ್ ಉದ್ದೇಶಕ್ಕೆ ಹೆಚ್ಚುವರಿ ಶುಲ್ಕ ರೂ.2,96,500/-, ಕೊಳಗೇರಿ ಸುಧಾರಣೆಗಾಗಿ ಸೆಸ್ ರೂ.1,48,500/- ಮತ್ತು ಸಾಮೂಹಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ ಸ್ಥಾಪಿಸುವ ಉದ್ದೇಶಕ್ಕಾಗಿ ಹೆಚ್ಚುವರಿ ಶುಲ್ಕ ರೂ.14,82,000/-ಗಳನ್ನು ಪಾವತಿಸಿರುವ ಚಲನ್ ನಂ.068 ದಿನಾಂಕ:13.04.2023.

* * * * * * * * * *

ವಿಷಯಕ್ಕೆ ಸಂಬಂಧಿಸಿದಂತೆ, ಅರ್ಜಿದಾರರಾದ ಶ್ರೀ ಎಂ.ಮುನಿರೆಡ್ಡಿ, ಶ್ರೀಮತಿ ಜಯಮ್ಮ, ಮೆ: ಜೀಸ್ ಡೆವಲಪರ್ಸ್ & ಬಿಲ್ಡರ್ಸ್ ಹಾಗೂ ಇತರರ ಪರವಾಗಿ ಜಿಪಿಎ ಮತ್ತು ಜಂಟಿ ಅಭಿವೃದ್ಧಿದಾರರಾದ M/s. BAKY Proptech ಪರವಾಗಿ ಪಾಲುದಾರರಾದ ಶ್ರೀ ಬಾಬುರೆಡ್ಡಿ.ಆರ್ ಮತ್ತು ಶ್ರೀ ಕೆ.ವಿ.ಅಶ್ವಥ ರೆಡ್ಡಿ ಇವರು ಉಲ್ಲೇಖ(1)ರಲ್ಲಿ ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಕಸಬಾ ಹೋಬಳಿ, ಆವಡದೇನಹಳ್ಳಿ ಗ್ರಾಮದ ಸ.ನಂ.67/1ರಲ್ಲಿನ 0-21ಗುಂಟೆ, 67/2ರಲ್ಲಿನ 0-05ಗುಂಟೆ, 68ರಲ್ಲಿನ 0-15ಗುಂಟೆ, 69/1ರಲ್ಲಿನ 0-12ಗುಂಟೆ, 69/2ರಲ್ಲಿನ 0-04ಗುಂಟೆ, 70ರಲ್ಲಿನ 0-34ಗುಂಟೆ, 71ರಲ್ಲಿನ 0-17ಗುಂಟೆ, 72ರಲ್ಲಿನ 0-12ಗುಂಟೆ, 73/1ರಲ್ಲಿನ 0-11ಗುಂಟೆ, 73/2ಎ ರಲ್ಲಿನ 0-04ಗುಂಟೆ, 73/2ಬಿ ರಲ್ಲಿನ 0-04ಗುಂಟೆ, 78/1ರಲ್ಲಿನ 0-07.04ಗುಂಟೆ, 78/2ರಲ್ಲಿನ 0-14.12ಗುಂಟೆ ಮತ್ತು ಬ್ಯಾಗಡದೇನಹಳ್ಳಿ ಗ್ರಾಮದ ಸ.ನಂ.20/1ರಲ್ಲಿನ 0-24ಗುಂಟೆ, 20/2ರಲ್ಲಿನ 0-04ಗುಂಟೆ, 22/3ರಲ್ಲಿನ 0-02ಗುಂಟೆ, 22/4ರಲ್ಲಿನ 0-04ಗುಂಟೆ, 23/1ರಲ್ಲಿನ 0-28ಗುಂಟೆ, 23/3ರಲ್ಲಿನ 0-03ಗುಂಟೆ, 24ರಲ್ಲಿನ 0-23ಗುಂಟೆ, 25/1ರಲ್ಲಿನ 0-12.08ಗುಂಟೆ, 25/2ರಲ್ಲಿನ 0-12.08ಗುಂಟೆ, 26ರಲ್ಲಿನ 0-07ಗುಂಟೆ, 27/1ರಲ್ಲಿನ 0-04.08ಗುಂಟೆ, 27/2ರಲ್ಲಿನ 0-02.04ಗುಂಟೆ, 27/3ರಲ್ಲಿನ 0-06.12ಗುಂಟೆ, 27/4ರಲ್ಲಿನ 0-06.08ಗುಂಟೆ, 27/5ರಲ್ಲಿನ 03.08ಗುಂಟೆ, 27/6ರಲ್ಲಿನ 0-03.08ಗುಂಟೆ, 28/1ರಲ್ಲಿನ 0-07.08ಗುಂಟೆ, 28/2ರಲ್ಲಿನ 0-07ಗುಂಟೆ, 28/3ರಲ್ಲಿನ 0-07.08ಗುಂಟೆ, 28/4ರಲ್ಲಿನ 0-39ಗುಂಟೆ, 29/1ರಲ್ಲಿನ 0-13ಗುಂಟೆ, 29/2ರಲ್ಲಿನ 0-13ಗುಂಟೆ, 30/1ರಲ್ಲಿನ 0-11ಗುಂಟೆ, 31/2ರಲ್ಲಿನ 0-19ಗುಂಟೆ, 31/3ರಲ್ಲಿನ 0-13.04ಗುಂಟೆ, 32/1ರಲ್ಲಿನ 0-09ಗುಂಟೆ, 32/2ರಲ್ಲಿನ 0-01ಗುಂಟೆ, 32/3ರಲ್ಲಿನ 0-14ಗುಂಟೆ, 32/4ರಲ್ಲಿನ 0-08ಗುಂಟೆ, 32/5ರಲ್ಲಿನ 0-06ಗುಂಟೆ, 32/6ರಲ್ಲಿನ 0-15ಗುಂಟೆ, 33/1ರಲ್ಲಿನ 0-07ಗುಂಟೆ, 33/2ರಲ್ಲಿನ 0-08ಗುಂಟೆ, 35/2ರಲ್ಲಿನ 0-12ಗುಂಟೆ, 35/3ರಲ್ಲಿನ 0-13ಗುಂಟೆ, 36/3ರಲ್ಲಿನ 0-06.08ಗುಂಟೆ, 36/5ರಲ್ಲಿನ 0-06.08ಗುಂಟೆ, 37/1ರಲ್ಲಿನ 0-14ಗುಂಟೆ, 37/2ರಲ್ಲಿನ 0-09ಗುಂಟೆ, 37/3ರಲ್ಲಿನ 0-08.08ಗುಂಟೆ, 39/1ರಲ್ಲಿನ 0-08ಗುಂಟೆ, 39/2ರಲ್ಲಿನ 0-38ಗುಂಟೆ, 40ರಲ್ಲಿನ 0-23ಗುಂಟೆ, 41ರಲ್ಲಿನ 01ಎಕರೆ 25.08ಗುಂಟೆ, 43/1ರಲ್ಲಿನ 0-22ಗುಂಟೆ ಒಟ್ಟು 18ಎಕರೆ 12.04ಗುಂಟೆ ವಿಸ್ತೀರ್ಣದ ಜಮೀನಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದಿಸಲು ಕೋರಿರುತ್ತಾರೆ.

ಪ್ರಸ್ತಾವನೆಯ ಸಂಬಂಧ ಉಲ್ಲೇಖ(2)ರ ಪ್ರಾಧಿಕಾರದ ಸಭೆಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನಿಸಲಾಗಿರುತ್ತದೆ. ಹಾಗೂ ಉಲ್ಲೇಖ(3)ರಂತೆ ಅರ್ಜಿದಾರರು ಅಗತ್ಯ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.

ಸದಸ್ಯ ಕಾರ್ಯದರ್ಶಿ
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್

B

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

ಆದ್ದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2–ಎ)ಪ್ರಕಾರ ಹಾಗೂ ವಲಯ ನಿಯಮಾವಳಿಯಂತೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

**ಷರತ್ತುಗಳು**

1. ತಾತ್ಕಾಲಿಕ ಅನುಮೋದನೆ ನೀಡಿದ ದಿನಾಂಕದಿಂದ ಮೂರು (3) ವರ್ಷಗಳ ಅವಧಿಯೊಳಗೆ ವಿನ್ಯಾಸದಲ್ಲಿನ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸತಕ್ಕದ್ದು.
2. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 [2–ಸಿ(1)] ರನ್ವಯ, ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಿದಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿನ ಮೊದಲನೇ ಹಂತದ ಶೇ.40ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.
   a) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ, ಬಯಲು ಜಾಗ ಮತ್ತು ರಸ್ತೆಗಾಗಿ ಕಾಯ್ದಿರಿಸಿದ ಪ್ರದೇಶಗಳನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗೆ ಹಾಗೂ ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ಪ್ರದೇಶವನ್ನು ಈ ಪ್ರಾಧಿಕಾರಕ್ಕೆ ಮುಕ್ತಟೆಯಾಗಿ ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸತಕ್ಕದ್ದು.
   b) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ಕಾಯ್ದಿರಿಸಿರುವಂತೆ ಉದ್ಯಾನವನ, ಬಯಲು ಜಾಗ, ರಸ್ತೆ ಹಾಗೂ ನಾಗರೀಕ ಸೌಲಭ್ಯ ಪ್ರದೇಶಗಳ ಗಡಿಗಳನ್ನು ಗುರುತಿಸತಕ್ಕದ್ದು.
   c) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿನಲ್ಲಿರುವ ಎಲ್ಲಾ ಮೂಲೆ ನಿವೇಶನಗಳ ನೋಂದಾಯಿತ ಅಡಮಾನ ಒಪ್ಪಂದ ಪತ್ರವನ್ನು ಸಲ್ಲಿಸತಕ್ಕದ್ದು.
   d) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ–2016ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ(RERA)ದಲ್ಲಿ ಸದರಿ ಯೋಜನೆಯ ನೋಂದಾಯಿಸಿರುವ ಬಗ್ಗೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
3. ಪ್ರಾಧಿಕಾರಕ್ಕೆ ಸಮಾಧಾನವಾಗುವಂತೆ ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲು ಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ನಿಯಮಿಸಬಹುದಾದ ಅಂಥ ನಿಯಮಗಳಿಗೆ ಅನುಸಾರವಾಗಿ ತಾತ್ಕಾಲಿಕ ಬಡಾವಣೆ ನಕ್ಷೆಗೆ ಮಂಜೂರಾತಿಯನ್ನು ನೀಡಲಾಗಿದೆ.
4. ಸಂಬಂಧಪಟ್ಟ ಪ್ರಾಧಿಕಾರದ/ಮಂಡಳಿ/ಇಲಾಖೆಯ ಮೇಲ್ವಿಚಾರಣೆಯ ಅಡಿಯಲ್ಲಿ, ಮೇಲೆ ಹೇಳಲಾದ ಎಲ್ಲಾ ಮೂಲ ಸೌಕರ್ಯಗಳನ್ನು ಒಳಗೊಂಡ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ಸಂಬಂಧಪಟ್ಟ ಪ್ರಾಧಿಕಾರ/ಮಂಡಳಿ/ಇಲಾಖೆಯಿಂದ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರವನ್ನು ಪಡೆದು ಮತ್ತು ಸ್ಥಳೀಯ ಸಂಸ್ಥೆಗೆ ರಸ್ತೆಗಳು, ಉದ್ಯಾನವನಗಳನ್ನು ಉಚಿತವಾಗಿ ನೋಂದಾಯಿತ ಪರಿತ್ಯಜನಾ ಪತ್ರದ ಮುಖಾಂತರ ಹಸ್ತಾಂತರಿಸಿರುವ ದಾಖಲೆಗಳನ್ನು ಸಲ್ಲಿಸತಕ್ಕದ್ದು.

05/09/2023

B

5. ಅನುಮೋದಿತ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ರೀತ್ಯ ಅನುಮೋದನೆ ನೀಡಿದ 03 ವರ್ಷಗಳೊಳಗಾಗಿ ಸಂಪೂರ್ಣವಾಗಿ ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

6. ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ಮಾತ್ರ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ವಿನ್ಯಾಸದಲ್ಲಿನ ನಿವೇಶಗಳನ್ನು ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ನಿವೇಶನಗಳಲ್ಲಿರುವ ಕಟ್ಟಡಗಳಿಗೆ ಪ್ರಾರಂಭ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದ್ದಲ್ಲ ಅಥವಾ ನೀಡತಕ್ಕದ್ದಲ್ಲ.

7. ಪ್ರಸ್ತಾವಿತ ಬಡಾವಣೆಯಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಬಡಾವಣೆಯ ಮಾಲೀಕರು ಒದಗಿಸತಕ್ಕದ್ದು.

8. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ Consent Order No. CTE-338977 PCB ID 139183 ದಿನಾಂಕ:10.08.2023ರಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳನ್ನು ಪಾಲಿಸತಕ್ಕದ್ದು.

9. ಮಾನ್ಯ ಜಿಲ್ಲಾಧಿಕಾರಿಗಳು, ಬೆಂಗಳೂರು ಇವರ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಎಲ್ಎನ್‌ಡಿ(ಎ)ಸಿಆರ್:22/23–24 ದಿನಾಂಕ:12.06.2023ರಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳನ್ನು ಪಾಲಿಸತಕ್ಕದ್ದು.

10. ಪ್ರಶ್ನಿತ ಜಮೀನಿನಲ್ಲಿ ಸರ್ಕಾರಿ 'ಬಿ' ಖರಾಬು ಜಾಗವನ್ನು ಯಥಾವತ್ತಾಗಿ ಕಾಯ್ದಿರಿಸತಕ್ಕದ್ದು ಹಾಗೂ ಈ ಜಾಗವನ್ನು ಒತ್ತುವರಿ ಮಾಡುವುದು ಅಥವಾ ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

11. ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಸರ್ಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಆನೇಕಲ್ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

12. ಈ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸತಕ್ಕದ್ದಲ್ಲ.

13. ಸದರಿ ವಸತಿ ವಿನ್ಯಾಸದಲ್ಲಿರುವ ಯಾವುದೇ ನಿವೇಶನಗಳನ್ನು ಉಪವಿಭಜನೆ ಮಾಡಿ ಮಾರಾಟ ಮಾಡತಕ್ಕದ್ದಲ್ಲ, ಒಂದು ವೇಳೆ ಯಾವುದೇ ಬದಲಾವಣೆಯ ಅವಶ್ಯಕತೆ ಇದ್ದಲ್ಲಿ ಪ್ರಾಧಿಕಾರದಿಂದ ಅನುಮತಿ ಪಡೆಯತಕ್ಕದ್ದು. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಯನ್ನು ಮಾಡಬಾರದು.

14. ಆನೇಕಲ್ ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.

15. ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆ, ರಸ್ತೆಬದಿ ಚರಂಡಿ, ಕಲ್‌ವರ್ಟ್‌ಗಳು, ಪಾದಚಾರಿ ಮಾರ್ಗ ಇತ್ಯಾದಿ ಸಿವಿಲ್ ಕಾಮಗಾರಿಗಳನ್ನು ಸಂಬಂಧಿತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ, ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

ಸದಸ್ಯ ಕಾರ್ಯದರ್ಶಿ
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.



B

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.
www.anekal.tpa.gov.in, www.e-vinyasa.kar.nic.in

16. ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.
17. ಸದರಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ವಿದ್ಯುತ್ ಕಾಮಗಾರಿಗಳನ್ನು ಸಂಬಂಧಿತ ಬೆಸ್ಕಾಂ ಮಂಡಳಿ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.
18. ಪ್ರಸ್ತಾಪಿತ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.
19. ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಅನ್ಯ ಉದ್ದೇಶಗಳಿಗೆ ಬಳಕೆ ಮಾಡತಕ್ಕದ್ದು.
20. ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡು ಕಡೆ ಗಿಡ/ಮರಗಳನ್ನು ಬೆಳೆಸುವುದು.
21. ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಕಟ್ಟಡಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
22. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.
23. ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
24. ತಾತ್ಕಾಲಿಕ ವಸತಿ ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ತಮ್ಮಿಂದ ಸಲ್ಲಿಸಲಾಗಿರುವ ಭೂಮಾಲೀಕತ್ವ ದಾಖಲೆ ಮತ್ತು ಇತರೆ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ಸುಳ್ಳಾಗಿದ್ದಲ್ಲಿ ಅಥವಾ ಪೋರ್ಜರಿಯಾಗಿದ್ದಲ್ಲಿ ವಿನ್ಯಾಸಕ್ಕೆ ನೀಡಿರುವ ತಾತ್ಕಾಲಿಕ ಅನುಮೋದನೆ ತಂತಾನೇ ರದ್ದಾಗುತ್ತದೆ.
25. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಸದರಿ ವಸತಿ ವಿನ್ಯಾಸ ನಕ್ಷೆಯಲ್ಲಿ ಸೂಚಿಸಲಾಗಿರುವ ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತ್ತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂಖ್ಯೆ. ಯುಡಿಡಿ 15 ಟಿಟಿಪಿ 2015, ದಿನಾಂಕ: 21.04.2020ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling trucks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.
26. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

05/09/2023

B

27. ಕರಡು ಅನುಮೋದಿತ ವಿನ್ಯಾಸ ನಕ್ಷೆಯನ್ನು ಸಾರ್ವಜನಿಕರ ವೀಕ್ಷಣೆಗಾಗಿ ಸ್ಥಳದಲ್ಲಿ ನಾಮಫಲಕದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

28. **ಈಗ ತಾತ್ಕಾಲಿಕ ವಿನ್ಯಾಸ ಅನುಮೋದನೆ ಮಾತ್ರ ನೀಡುತ್ತಿದ್ದು, ಅಂತಿಮ ವಿನ್ಯಾಸ ಅನುಮೋದನೆ /ನಿವೇಶನಗಳ ಬಿಡುಗಡೆ ಪಡೆಯುವವರೆಗೂ ಈ ತಾತ್ಕಾಲಿಕ ವಿನ್ಯಾಸದ ಯಾವುದೇ ನಿವೇಶನಗಳನ್ನು ಮಾರಾಟ ಮಾಡತಕ್ಕದ್ದಲ್ಲ.**

29. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಚಿಸಿರುವ Direction under section 18(1)(b) of water (prevention and control of pollution)Act, 1974ರ ಕಾಯ್ದೆಯಲ್ಲಿ ರೂಪಿಸಿರುವ ನಿಯಮದಂತೆ ಕ್ರಮಕೈಗೊಳ್ಳಲು ಸೂಚಿಸಿರುವಂತೆ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಲಾಗಿದೆ.

    i. ಮಳೆನೀರು ಕಾಲುವೆಯನ್ನು ಮುಚ್ಚದಂತೆ ಕ್ರಮವಹಿಸುವುದು.
    ii. ಮಳೆನೀರು ಕಾಲುವೆಗಳಿಗೆ ಯಾವುದೇ ಕೊಳಚೆ ನೀರು ಹಾಗೂ ಇನ್ನಿತರೆ ತ್ಯಾಜ್ಯ ವಸ್ತುಗಳು ಸೇರ್ಪಡೆಯಾಗದಂತೆ ಕ್ರಮವಹಿಸುವುದು.
    iii. ಕಂದಾಯ ಇಲಾಖೆಯ ದಾಖಲೆಗಳಂತೆ ಇರುವ ಮಳೆ ನೀರು ಕಾಲುವೆಗಳ ಅಳತೆಗಳನ್ನು ಅತಿಕ್ರಮ/ಒತ್ತುವರಿ ಆಗದಂತೆ ಯಥಾವತ್ತಾಗಿ ಕಾಯ್ದಿರಿಸಿಕೊಂಡು ಸರಾಗವಾಗಿ ನೀರು ಹರಿಸಲು ಬೇಕಾದ ಕ್ರಮವಹಿಸುವುದು.
    iv. ಮಳೆನೀರು ಕಾಲುವೆಗಳು ತೆರೆದ ಸ್ಥಿತಿಯಲ್ಲಿ ಸ್ವಚ್ಚವಾಗಿರುವಂತೆ ಕ್ರಮವಹಿಸುವುದು.

30. ಪ್ರಸ್ತಾವಿತ ಪ್ರದೇಶದಲ್ಲಿ ಹಾದುಹೋಗಿರುವ ನಾಲಾ ಮೇಲೆ ಸಂಪರ್ಕ ಸೇತುವೆ ನಿರ್ಮಿಸಲು ಸಂಬಂಧಪಟ್ಟ ಇಲಾಖೆಯಿಂದ ಅನುಮೋದನೆ ಪಡೆದು, ನಂತರ ಸೇತುವೆ ನಿರ್ಮಿಸತಕ್ಕದ್ದು.

31. ಮೇಲಿನಂತೆ ನೀಡಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

ಅರ್ಜಿದಾರರು ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಒಟ್ಟಾರೆಯಾಗಿ ಅಭಿವೃದ್ಧಿಪಡಿಸಿದ ನಂತರ, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ನೀರು ಸರಬರಾಜು, ಒಳಚರಂಡಿ ಅಭಿವೃದ್ಧಿಪಡಿಸಿರುವ ಬಗ್ಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ, ರಸ್ತೆ ಕಾಮಗಾರಿಗಳು, ಮಳೆನೀರು ಚರಂಡಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ, ಹಾಗೂ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಗೂ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಲ್ಲಿಸಿ, ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಹಾಗೂ ನಿವೇಶನ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

**ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17(2–ಡಿ)ರನ್ವಯ, ವಿನ್ಯಾಸದ ಕಾಮಗಾರಿಗಳನ್ನು 3 ವರ್ಷದ ಒಳಗೆ ಪೂರ್ಣಗೊಳಿಸತಕ್ಕದ್ದು, ನಿಮ್ಮ ಮನವಿಯ ಮೇರೆಗೆ ಪ್ರಾಧಿಕಾರವು ಸಕಾರಣಗಳಿದ್ದಲ್ಲಿ ಕಾಮಗಾರಿಗಳು ಪೂರ್ಣಗೊಳಿಸಲು 1 ವರ್ಷ ಕಾಲಾವಧಿಯನ್ನು ವಿಸ್ತರಿಸಬಹುದು, ಸದರಿ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸದಿದ್ದಲ್ಲಿ ಪ್ರಾಧಿಕಾರವು ನೀಡಿರುವ ಅನುಮೋದನೆ ರದ್ದಾಗುತ್ತದೆ. ನಂತರ**



B

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

ಹೊಸದಾಗಿ ಅನುಮೋದನೆಗಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ ಎಂಬ ವಿಷಯವನ್ನು ಈ ಮೂಲಕ ತಿಳಿಯಪಡಿಸಲಾಗಿದೆ. ಅನುಮೋದಿತ ವಿನ್ಯಾಸಕ್ಕೆ ವಿರುದ್ಧವಾಗಿ ಯಾವುದೇ ಕಾಮಗಾರಿಗಳನ್ನು ಕೈಗೊಂಡಿದ್ದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ಕ್ರಮ ತೆಗೆದುಕೊಳ್ಳಲಾಗುವುದು.

05/09/2023

ಸದಸ್ಯ ಕಾರ್ಯದರ್ಶಿಗಳು ಹಾಗೂ ನಗರ ಮತ್ತು
ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

ಇವರಿಗೆ,

ಶ್ರೀ ಎಂ.ಮುನಿರೆಡ್ಡಿ, ಶ್ರೀಮತಿ ಜಯಮ್ಮ, ಮೆ: ಪೀಸ್ ಡೆವಲಪರ್ಸ್
& ಬಿಲ್ಡರ್ಸ್ ಹಾಗೂ ಇತರರ ಪರವಾಗಿ ಜಿಪಿಎ ಮತ್ತು ಜಂಟಿ
ಅಭಿವೃದ್ಧಿದಾರರಾದ **M/s. BAKY Proptech** ಪರವಾಗಿ
ಪಾಲುದಾರರಾದ ಶ್ರೀ ಬಾಬುರೆಡ್ಡಿ.ಆರ್ ಮತ್ತು ಶ್ರೀ ಕೆ.ವಿ.ಅಶ್ವಥರೆಡ್ಡಿ,
ನಂ.90, 2ನೇ ಮಹಡಿ, 4ನೇ ಸೆಕ್ಟರ್, ಹೆಚ್.ಎಸ್.ಆರ್.
ಲೇಔಟ್, ಬೆಂಗಳೂರು-560 102.